ಪ್ರಧಾನ ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಣಸೂರು.
ಸಿ.ಸಿ. ಸಂಖ್ಯೆಃ **72/2019**

| | | | |
|---|---|---|---|
| ಹೆಸರುಃ | ಕುಮಾರ್ | ಪಿಡಬ್ಲ್ಯೂ **-01** | ಸಿಡಬ್ಲ್ಯೂ **-02** |
| ತಂದೆಃ | ದೇವರಾಜು | ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾದ ದಿನಾಂಕಃ **15.03.2021.** | |
| ವಯಸ್ಸುಃ | **38** ವರ್ಷ | | |
| ಕೆಲಸಃ | ಬಟ್ಟೆ ವ್ಯಾಪಾರ | | |
| ವಾಸಸ್ಥಳಃ | ಹುಣಸೂರು. | | |

ಮುಖ್ಯ ವಿಚಾರಣೆಃ ಸ.ಸ.ಅ.ರವರಿಂದಃ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆ ಸ್ಥಳ ಮಹಜರ್ ಆಗಿದ್ದು ಅದನ್ನು ನಿಪಿ **1** ಎಂದು, ಸಾಕ್ಷಿಯ ಸಹಿಯನ್ನು ನಿಪಿ **1** ಎ ಎಂದು ಗುರುತಿಸಲಾಯಿತು. ಸುಮಾರು **3-4** ವರ್ಷಗಳ ಹಿಂದೆ ಚಾಸಾ **1** ರವರ ಮನೆಯ ಮುಂದೆ ನಿಪಿ **1** ಕ್ಕೆ ಸಹಿ ಮಾಡಿರುತ್ತೇನೆ. ನಿಪಿ **1** ರ ವಿಚಾರಗಳು ಗೊತ್ತಿಲ್ಲ. ನನ್ನೊಂದಿಗೆ ಚಾಸಾ **3** ರವರು ಸಹಿ ಮಾಡಿರುತ್ತಾರೆ. ನನ್ನ ಸಮಕ್ಷಮ ಪೊಲೀಸರು ಮಹಜರ್ ಮಾಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ.ಸ.ಅ.ರವರಿಂದಃ ದಿಃ **24-04-2018** ರಂದು ಪೊಲೀಸರು ಘಟನಾ ಸ್ಥಳದಲ್ಲಿ ಹಾಜರಿದ್ದು ಚಾಸಾ **1** ರವರು ತೋರಿಸಿಕೊಟ್ಟ ಸ್ಥಳವನ್ನು ಮಧ್ಯಾಹ್ನ **1** ರಿಂದ **1.45** ರವರೆಗೆ ಪರಿಶೀಲಿಸಿ ನಿಪಿ **1** ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ ನಿಪಿ **1** ರ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u> ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಹುಣಸೂರು.